# ಕರ್ನಾಟಕ ವಿಧಾನ ಪರಿಷತ್ತು

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ, ಇವರು ಉಡುಪಿ ಜಿಲ್ಲೆಯಲ್ಲಿ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಸ್ಥಾಪಿಸುವ ಕುರಿತು ನಿಯಮ 72 ರ ಮೇರೆಗೆ ನೀಡಿರುವ ಸರ್ಕಾರದ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

**ಗಮನ ಸೆಳೆಯುವ ಸೂಚನೆ:**

ಉಡುಪಿ ಜಿಲ್ಲೆಯಲ್ಲಿ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಸ್ಥಾಪಿಸುವ ಕುರಿತು.

"ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯವನ್ನು ಬ್ರಹ್ಮಾವರದಲ್ಲಿ ಪ್ರಕರಣಗಳು ಹೆಚ್ಚಾಗಿರುವುದರಿಂದ ಇಲ್ಲಿಗೆ ಸ್ಥಳಾಂತರಿಸಲು ಉಚ್ಚನ್ಯಾಯಾಲಯ ಹಾಗೂ ಸರ್ಕಾರ ನಿರ್ಧರಿಸಿದ್ದು, ಇದರ ವಿರುದ್ಧ ಉಡುಪಿ ಜಿಲ್ಲಾ ವಕೀಲರ ಸಂಘ ವರ್ಗಾಯಿಸದಿರಲು ಮನವಿ ಸಲ್ಲಿಸಿರುತ್ತಾರೆ. ಇವರ ಮನವಿ ಮೇರೆಗೆ ಸರ್ಕಾರದ ವತಿಯಿಂದ ಈ ಪ್ರಸ್ತಾವನೆಯನ್ನು ಕೈ ಬಿಡಲಾಗಿರುತ್ತದೆ. ಹಾಗೂ ಹೊಸದಾಗಿ ಬ್ರಹ್ಮಾವರದಲ್ಲಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯವನ್ನು ಸ್ಥಾಪಿಸಬೇಕಂಬ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿದ್ದು, ಇದನ್ನು ಅನುಷ್ಠಾನಗೊಳಿಸಲು ಮಾನ್ಯ ಕಾನೂನು, ನ್ಯಾಯ ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯ ಬಯಸುತ್ತೇನೆ."

**ಉತ್ತರ:**

ಉಡುಪಿ ಜಿಲ್ಲೆಯ ಬ್ರಹ್ಮಾವರದಲ್ಲಿ ಸ್ವತಂತ್ರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯವನ್ನು ಸ್ಥಾಪಿಸುವ ಬಗ್ಗೆ ಮತ್ತು 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಉಡುಪಿ ಈ ನ್ಯಾಯಾಲಯವನ್ನು ಬ್ರಹ್ಮಾವರಕ್ಕೆ ಸ್ಥಳಾಂತರಿಸುವ ಬಗ್ಗೆ ಸೂಕ್ತ ನಿರ್ಧಾರವನ್ನು ತೆಗೆದುಕೊಳ್ಳಲು ಪ್ರಸ್ತಾವನೆಯು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಪರಿಶೀಲನೆಯಲ್ಲಿರುತ್ತದೆ.

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು

**ಸಂಖ್ಯೆ: ಲಾ-ಎಲ್‌ಸಿಇ/64/2026**